ಬೈಂದೂರು ಪ್ರಥಮ ದರ್ಜೆ ಕಾಲೇಜಿನಲ್ಲಿ ಉಪನ್ಯಾಸಕರು ಹಾಗೂ ಸಿಬ್ಬಂದಿ ಕೊರತೆ.

776 - ಶ್ರೀ ಐ.ಎಂ. ಜಯರಾಮಶೆಟ್ಟಿ (ಬೈಂದೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೈಂದೂರು ಪ್ರಥಮ ದರ್ಜೆ ಕಾಲೇಜಿನಲ್ಲಿ ಉಪನ್ಯಾಸಕರ ಮತ್ತು ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಸದರಿ ಕಾಲೇಜಿನಲ್ಲಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಇ) *ಹಾಗಿದ್ದಲ್ಲಿ ಮುಂದಿನ ಶೈಕ್ಷಣಿಕ ವರ್ಷದಲ್ಲಿ ಸದರಿ ಕಾಲೇಜಿಗೆ ಎಷ್ಟು ಉಪನ್ಯಾಸಕರನ್ನು ಸರ್ಕಾರ ಭರ್ತಿ ಮಾಡುತ್ತದೆ?*

ಶ್ರೀ ಬಿ. ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಬಂದಿದೆ

ಇ) ವಾಣಿಜ್ಯಶಾಸ್ತ್ರ ವಿಷಯಕ್ಕೆ ಸಂಬಂಧಿಸಿದಂತೆ ಮಾತ್ರ ಎರಡು ಹುದ್ದೆಗಳು ಖಾಲಿ ಇದ್ದು, ಈ ಹುದ್ದೆಗಳನ್ನು 1997-98ನೇ ಸಾಲಿನ ಸಾರ್ವತ್ರಿಕ ವರ್ಗಾವಣೆ ಸಮಯದಲ್ಲಿ ತುಂಬಲು ಸೂಕ್ತ ಕ್ರಮ ಒರುಗಿಸಲಾಗುವುದು.

ಹಿರೇಕೆರೂರು ತಾಲ್ಲೂಕು ಮೇದೂರ ಗ್ರಾಮ ಪಂಚಾಯಿತಿಯಲ್ಲಿ ಹಣ ದುರುಪಯೋಗ.

777 - ಶ್ರೀ ಯು.ಬಿ. ಬಣಕಾರ(ಹಿರೇಕೆರೂರು) : ಮಾನ್ಯ ಗ್ರಾಮೀಣಾಭಿವೃದ್ಧಿಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹಿರೇಕೆರೂರು ತಾಲ್ಲೂಕು ಮೇದೂರು ಗ್ರಾಮ ಪಂಚಾಯಿತಿಯಲ್ಲಿ ಈ ಹಿಂದೆ ಶೇಕಡಾ 18ರಷ್ಟು ಹಣದಲ್ಲಿ ಪಂಚಾಯತಿಯವರಿಗೆ ಸಾಮಗ್ರಿಗಳನ್ನು ವಿತರಿಸುವಲ್ಲಿ ದುರುಪಯೋಗವಾಗಿರುವುದು ಸರಕಾರದ ಗಮನಕ್ಕೆ ಬಂದಿದೆಯೇ?*

ಆ) *ಈ ಬಗ್ಗೆ ಗ್ರಾಮ ಸಭೆಯಲ್ಲಿ ಆದ ಠರಾವಿನ ವಿವರವೇನು?*

ಇ) *ಈ ಬಗ್ಗೆ ತಾಲ್ಲೂಕು ಪಂಚಾಯಿತಿ ಸಮಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬಿ.ಡಿ.ಓರವರು ಯಾವ ಕ್ರಮ ತೆಗೆದುಕೊಂಡಿದ್ದಾರೆ?*

ಈ) *ಅವರಿಂದ ಕರ್ತವ್ಯ ಲೋಪವಾಗಿರುವುದು ನಿಜವಲ್ಲವೆ? ಅವರ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ?*